Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 1-08-2022

**ಪತ್ರಿಕಾ ಪ್ರಕಟಣೆ:**

# ರಾಜ್ಯಮಟ್ಟದ ಯುವಜನ ಮೇಳದಲ್ಲಿ ವಿ.ಡಿ.ಐ.ಟಿ ಯ ವಿದ್ಯಾರ್ಥಿಗೆ ರಜತ ಪದಕ

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿಯ ರಾಜ್ಯಮಟ್ಟದ 21ನೇ ಯುವಜನ ಮೇಳ "ಪ್ರತಿಬಿಂಬೋತ್ಸವ" ದಲ್ಲಿ ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದ ವಿದ್ಯಾರ್ಥಿಯಾದ ಆದಿತ್ಯ ಮಧುಸೂದನ ಶಾಸ್ತ್ರೀಯ ವಾದ್ಯ ನುಡಿಸುವ ವೈಯಕ್ತಿಕ ವಿಭಾಗದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನವನ್ನುಗಳಿಸಿ ರಜತ ಪದಕ ತನ್ನದಾಗಿಸಿಕೊಂಡಿದ್ದಾನೆ. ಬೆಂಗಳೂರಿನ ಬಸವನಗುಡಿಯ ರಸ್ತೆಯಲ್ಲಿರುವ ಬಿ.ಎಂ.ಎಸ್. ತಾಂತ್ರಿಕ ಮಹಾವಿದ್ಯಾಲಯದಲ್ಲಿ ಜುಲೈ 29 ರಿಂದ 31ರ ವರೆಗೆ ಜರುಗಿದ ಯುವಜನ ಮೇಳದಲ್ಲಿ ತಬಲಾ ವಾದ್ಯವನ್ನು ನುಡಿಸಿ ದ್ವಿತೀಯ ಸ್ಥಾನ ತನ್ನದಾಗಿಸಿಕೊಂಡಿದ್ದಾನೆ. ವಿಜೇತರಿಗೆ ವಿ.ತಾ.ವಿ. ಬೆಳಗಾವಿಯ ಉಪಕುಲಪತಿಗಳಾದ ಡಾ.ಕರಿಸಿದ್ದಪ್ಪ ಅವರು ಪುರಸ್ಕರಿಸಿದರು. ರಾಜ್ಯಮಟ್ಟದ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಪ್ರಥಮ ವರ್ಷದ ವಿದ್ಯಾರ್ಥಿ ಆದಿತ್ಯ.ಎಂ ನ ಸಾಧನೆಯು ಸಂತಸ ತಂದಿದೆ ಎಂದು ಪ್ರಾಂಶುಪಾಲರಾದ ಡಾ. ವಿ.ಎ.ಕುಲಕರ್ಣಿ ಅವರು ಹೇಳಿದ್ದಾರೆ. ಸಾಂಸ್ಕೃತಿಕ ವಿಭಾಗದ ಸಂಚಾಲಕರಾದ ಪ್ರೊ.ಸಂಜಯ್ ಡಂಬಾಳ ವಿದ್ಯಾರ್ಥಿಯ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಮಹಾವಿದ್ಯಾಲಯದ ಆಡಳಿತ ಮಂಡಳಿ, ಎಲ್ಲಾ ಸಿಬ್ಬಂದಿ ವರ್ಗ ವಿದ್ಯಾರ್ಥಿಯ ಯಶಸ್ಸಿಗೆ ಶುಭಕೋರಿದ್ದಾರೆ ಎಂದು ಪ್ರಾಂಶುಪಾಲರು ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾಂಶುಪಾಲರು
Principal
KLS Vishwanathrao Deshpande
Institute of Technology, Haliyal

